ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಹದಿನಾರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 21ನೇ ಫೆಬ್ರವರಿ, 2018

(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಏಳನೇ ಪಟ್ಟಿ
ಆ) ದಿನಾಂಕ: 07.02.2018ರ ಎರಡನೇ ಪಟ್ಟಿಯಿಂದ **ತಡೆಹಿಡಿಯಲಾದ** ಶ್ರೀ ರಾಜೀವ್. ಪಿ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ. 27(187)	:	ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು
ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಏಳನೇ ಪಟ್ಟಿ

2. ವರದಿಗಳನ್ನೊಪ್ಪಿಸುವುದು

1) **ಶ್ರೀ ಕಿಮ್ಮನೆ ರತ್ನಾಕರ್** (ಅಧ್ಯಕ್ಷರು, ಹಕ್ಕುಬಾಧ್ಯತೆಗಳ ಸಮಿತಿ) ಅವರು 2016–17ನೇ ಸಾಲಿನ ಹಕ್ಕುಬಾಧ್ಯತೆಗಳ ಸಮಿತಿಯ 10ನೇ, 11ನೇ ಮತ್ತು 12ನೇ ವರದಿಗಳನ್ನೊಪ್ಪಿಸುವುದು.

2) **ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ** (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ) ಅವರು 2017–18ನೇ ಸಾಲಿನ ಸರ್ಕಾರಿ ಭರವಸೆಗಳ ಸಮಿತಿಯ 11ನೇ ವರದಿಯನ್ನೊಪ್ಪಿಸುವುದು.

3. ವಿತ್ತೀಯ ಕಾರ್ಯಕಲಾಪಗಳು

ಶ್ರೀ ಸಿದ್ದರಾಮಯ್ಯ (ಮುಖ್ಯ ಮಂತ್ರಿಗಳು) ಅವರು : 2017–18ನೇ ಸಾಲಿನ ಪೂರಕ ಅಂದಾಜುಗಳನ್ನು (ಮೂರನೆಯ ಹಾಗೂ ಅಂತಿಮ ಕಂತು) ಮಂಡಿಸುವುದು.

4. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

5. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) **ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಅವರು :–**

ಅ) 2018ನೇ ಸಾಲಿನ ಕರ್ನಾಟಕ ಆಧಾರ್ (ಹಣಕಾಸು ಮತ್ತು ಇತರೆ ಸಬ್ಸಿಡಿಗಳು, ಪ್ರಯೋಜನಗಳು ಮತ್ತು ಸೇವೆಗಳ ಉದ್ದೇಶಿತ ವಿತರಣೆ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2) **ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವರು) ಅವರು :–**

ಅ) 2018ನೇ ಸಾಲಿನ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3) **ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು :–**

ಅ) 2018ನೇ ಸಾಲಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4) **ಶ್ರೀ ಬಿ. ರಮಾನಾಥ ರೈ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) ಅವರು :–**

ಅ) 2018ನೇ ಸಾಲಿನ ಕರ್ನಾಟಕ ಮರಗಳ ಸಂರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5) **ಶ್ರೀ ಬಸವರಾಜ ರಾಯರೆಡ್ಡಿ (ಉನ್ನತ ಶಿಕ್ಷಣ ಸಚಿವರು) ಅವರು :–**

ಅ) 2018ನೇ ಸಾಲಿನ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6) **ಶ್ರೀ ಬಸವರಾಜ ರಾಯರೆಡ್ಡಿ (ಉನ್ನತ ಶಿಕ್ಷಣ ಸಚಿವರು) ಅವರು :–**

ಅ) 2018ನೇ ಸಾಲಿನ ಖಾಜಾ ಬಂದಾನವಾಜ್ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ವಿತ್ತೀಯ ಕಾರ್ಯಕಲಾಪಗಳು

"2018–19ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ" .

7. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಜಗದೀಶ್ ಶೆಟ್ಟರ, ಬಿ.ಎನ್.ವಿಜಯಕುಮಾರ್, ಶಿವನಗೌಡ ನಾಯಕ್, ಡಿ.ಎನ್. ಜೀವರಾಜ್ ಮತ್ತು ಸಿ.ಟಿ. ರವಿ ಇವರುಗಳು** – ರಾಜ್ಯದಲ್ಲಿ ರೈತರು 2017–18ನೇ ಸಾಲಿನ ಮುಂಗಾರು ಮತ್ತು ಹಿಂಗಾರು ಹಂಗಾಮಿನಲ್ಲಿ ರೈತರಿಂದ ವಿಮೆ ಹಣ ಪಡೆದಿದ್ದು, ಪ್ರಸ್ತುತ ಸಂಕಷ್ಟದಲ್ಲಿರುವ ರೈತರಿಗೆ ಬೆಳೆ ವಿಮೆ ಪರಿಹಾರ ಒದಗಿಸುವ ಬಗ್ಗೆ

ಹಾಗೂ

ಶ್ರೀ ಬಸವರಾಜ ಎಸ್. ಬೊಮ್ಮಾಯಿ ಇವರು – ಹಾವೇರಿ ಜಿಲ್ಲೆಯ ರೈತರಿಗೆ ಭತ್ತದ ಬೆಳೆಯ ವಿಮೆ ಹಣ ಪಾವತಿಯಾಗದಿರುವ ಬಗ್ಗೆ ಪ್ರತಿಭಟನೆ ಮಾಡುತ್ತಿರುವ ರೈತರನ್ನು ವಿನಾಕಾರಣ ಬಂಧಿಸುತ್ತಿದ್ದು, ಬೆಳೆ ವಿಮೆ ಪರಿಹಾರ ಹಣವನ್ನು ಕೂಡಲೇ ಬಿಡುಗಡೆ ಮಾಡುವಂತೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಹೆಚ್.ಡಿ ಕುಮಾರಸ್ವಾಮಿ, ಹೆಚ್. ಡಿ ರೇವಣ್ಣ, ಕೆ.ಎಂ. ಶಿವಲಿಂಗೇಗೌಡ, ಸಿ.ಬಿ. ಸುರೇಶ್‌ಬಾಬು ಮತ್ತು ಇತರರು** – ಹಾಸನ ಜಿಲ್ಲೆಯ ಹೇಮಾವತಿ, ಯಗಚಿ ಮತ್ತು ವಾಟೇಹೊಳೆ ಜಲಾಶಯಗಳ ವ್ಯಾಪ್ತಿಯಲ್ಲಿ ಸಮರ್ಪಕವಾಗಿ ನೀರನ್ನು ಹರಿಸದಿರುವುದರಿಂದ ಬೆಳೆ ನಾಶವಾಗಿದ್ದು, ಅಲ್ಲಿನ ರೈತರಿಗೆ ಪರಿಹಾರ ನೀಡುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಕಿಮ್ಮನೆ ರತ್ನಾಕರ್, ವಿಜಯಾನಂದ ಎಸ್. ಕಾಶಪ್ಪನವರ್, ಮತ್ತು ರಾಮಕೃಷ್ಣ ಶಿ. ದೊಡ್ಡಮನಿ ಇವರುಗಳು** – ಶಿವಮೊಗ್ಗ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ನಲ್ಲಿ ನಕಲಿ ಸದಸ್ಯರ ಹೆಸರಿಗೆ ನಕಲಿ ಚಿನ್ನವಿರಿಸಿ ರೂ. 65.00 ಕೋಟಿಗಳಿಗೂ ಹೆಚ್ಚಿನ ಅವ್ಯವಹಾರ ನಡೆಸಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

8. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಇವರು** – ರಾಜ್ಯದಲ್ಲಿ ಪ್ರತಿ ತಾಲ್ಲೂಕಿಗೆ ಒಂದು ರಾಗಿ ಖರೀದಿ ಕೇಂದ್ರವನ್ನು ಸ್ಥಾಪನೆ ಮಾಡುವ ಬಗ್ಗೆ ಘೋಷಣೆ ಮಾಡಿದ್ದರೂ ಇದುವರೆವಿಗೂ ರಾಗಿ ಖರೀದಿ ಕೇಂದ್ರವನ್ನು ಸ್ಥಾಪಿಸದೇ ಇರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

2) **ಡಾ॥ ಸಿ.ಎನ್ ಅಶ್ವಥ್ ನಾರಾಯಣ್ ಇವರು** – ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ ಬಿಪಿಎಲ್ ಪಡಿತರ ಚೀಟಿಗಳನ್ನು ನೀಡಲು ಅರ್ಜಿಗಳನ್ನು ಜೂನ್ 2017ರಲ್ಲಿಯೇ ಪಡೆದಿದ್ದರೂ, ಇದುವರೆವಿಗೂ ಪಡಿತರ ಚೀಟಿಯನ್ನು ವಿತರಿಸದೇ ಇರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

3) **ಶ್ರೀ ದೊಡ್ಡನಗೌಡ ಹೆಚ್. ಪಾಟೀಲ ಇವರು** – ಕೊಪ್ಪಳ ಏತ ನೀರಾವರಿ ಯೋಜನೆಯ ಕಾಮಗಾರಿಗೆ 2018–19ನೇ ಸಾಲಿನ ರಾಜ್ಯ ಆಯವ್ಯಯದಲ್ಲಿ ಹೆಚ್ಚಿನ ಅನುದಾನ ಒದಗಿಸಿ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

4) **ಡಾ॥ ರಫೀಕ್ ಅಹ್ಮದ್.ಎಸ್ ಇವರು** – ತುಮಕೂರು ನಗರ ವ್ಯಾಪ್ತಿಯ ಜಿ.ಸಿ.ಆರ್. ಕಾಲೋನಿಯ ನಿವಾಸಿಯಾಗಿದ್ದ ನದೀಂ ಪಾಷ ರವರ ಹತ್ಯೆಯಾಗಿದ್ದು, ಅವರ ಕುಟುಂಬ ಆರ್ಥಿಕವಾಗಿ ತುಂಬಾ ಕಷ್ಟದಲ್ಲಿರುವುದರಿಂದ ಅವರಿಗೆ ಗರಿಷ್ಠ ಪರಿಹಾರ ಘೋಷಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

–5–

5) **ಶ್ರೀ ಹೆಚ್.ಎಸ್. ಶಿವಶಂಕರ್ ಇವರು** – ಹರಿಹರ ಮತ್ತು ದಾವಣಗೆರೆ ನಗರಗಳಿಗೆ ಕುಡಿಯುವ ನೀರು ಹಾಗೂ ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ಸಲುವಾಗಿ ತುಂಗಾಭದ್ರ ನದಿಗೆ ಕವಲೆತ್ತು ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

6) **ಶ್ರೀ ಬಿ. ಸುರೇಶ್‌ಗೌಡ ಇವರು** – ತುಮಕೂರು ತಾಲ್ಲೂಕು ಕಣಕುಪ್ಪೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 2017–18ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿಯಲ್ಲಿ ಆಯ್ಕೆಯಾದ 75 ಫಲಾನುಭವಿಗಳ ಪೈಕಿ ಭೌತಿಕ ಪರೀಕ್ಷೆಯ ನಂತರ ವಸತಿ ಯೋಜನೆಯ ಪ್ರಯೋಜನ ಪಡೆಯಲು ಅರ್ಹತೆ ಹೊಂದಿರುವ 73 ಫಲಾನುಭವಿಗಳಿಗೆ ಬಿಲ್ ಪಾವತಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಎಸ್. ಸುರೇಶ್‌ಕುಮಾರ್ ಇವರು** – ಬೆಳಗಾವಿ ಜಿಲ್ಲೆಯ ಖಾನಾಪುರ ತಾಲ್ಲೂಕಿನ ಭೀಮ್‌ಗಡ್ ಸಾಹಸ ಶಿಬಿರದಲ್ಲಿ ನಿರ್ಮಿಸಲಾಗಿರುವ ಇಕೋ ಟೂರಿಸಂ ಕಾಮಗಾರಿಗಳಿಗೆ ಸಂಬಂಧಪಟ್ಟಂತೆ ಡಿ.ಎಸ್.ಎಂ.ಎಸ್. ಸಂಸ್ಥೆಗೆ ಹಣ ಪಾವತಿ ಮಾಡುವಲ್ಲಿ ಮೆ: ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ ಲಿಮಿಟೆಡ್ ಸಂಸ್ಥೆಯವರು ವಿಳಂಬ ಧೋರಣೆ ಅನುಸರಿಸುತ್ತಿರುವ ಬಗ್ಗೆ ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

8) **ಶ್ರೀ ಬಿ. ಸುರೇಶ್‌ಗೌಡ ಇವರು** – 2017–18ನೇ ಸಾಲಿನಲ್ಲಿ ತುಮಕೂರು ಗ್ರಾಮಾಂತರ ಕ್ಷೇತ್ರಕ್ಕೆ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ವಿವಿಧ ಯೋಜನೆಗಳಡಿ ಕಾಮಗಾರಿಗಳು ಶೇಕಡ 90ರಷ್ಟು ಪೂರ್ಣಗೊಂಡಿದ್ದು, ಇಲಾಖೆಗೆ ಹಣ ಬಿಡುಗಡೆಯಾಗಿದ್ದರೂ ಗುತ್ತಿಗೆದಾರರಿಗೆ ಹಣ ಪಾವತಿಸಲು ವಿಳಂಬ ಮಾಡುತ್ತಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

9) **ಶ್ರೀ ಹೆಚ್.ಎಸ್. ಶಿವಶಂಕರ್ ಇವರು** – ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಹೊರಗುತ್ತಿಗೆ ಪದ್ಧತಿಯ ಮೂಲಕ ತುಂಬುತ್ತಿದ್ದು, ಈ ಹೊರಗುತ್ತಿಗೆ ನೇಮಕಾತಿಯನ್ನು ರದ್ದುಪಡಿಸಿ ನೇರ ನೇಮಕಾತಿ ಮೂಲಕ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಮುಖ್ಯ ಮಂತ್ರಿಗಳ ಗಮನ ಸೆಳೆಯುವುದು.

10) **ಶ್ರೀ ಕೆ.ಎಸ್. ಮಂಜುನಾಥ ಗೌಡ ಇವರು** – ಮಾಲೂರು ವಿಧಾನಸಭಾ ಕ್ಷೇತ್ರದ ಕೆಲವು ಭಾಗಗಳಲ್ಲಿ ಸರ್ಕಾರಿ ಗೋಮಾಳಕ್ಕೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಅವುಗಳನ್ನು ರಾಜ್ಯದ ಬಂಡವಾಳ ಶಾಹಿಗಳಿಗೆ ಪರಭಾರೆ ಮಾಡಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

11) **ಶ್ರೀ ಬಿ.ಸುರೇಶ್ ಗೌಡ ಇವರು** – ತುಮಕೂರು ಗ್ರಾಮಾಂತರ ಕ್ಷೇತ್ರಕ್ಕೆ 2017–18ನೇ ಸಾಲಿನ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಿಂದ ನಾಲ್ಕನೇ ಕಂತಿನ ಹಣವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

12) **ಶ್ರೀ ಹೆಚ್.ಎಸ್. ಶಿವಶಂಕರ್ ಇವರು** – ರಾಜ್ಯದಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಕರೀಕರ ಸಬಲೀಕರಣಕ್ಕಾಗಿ ಸರ್ಕಾರವು ಒದಗಿಸುತ್ತಿರುವ ಸೌಲಭ್ಯಗಳ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

13) **ಶ್ರೀ ಕಳಲೆ ಎನ್. ಕೇಶವಮೂರ್ತಿ ಇವರು** – ನಂಜನಗೂಡು ನಗರದ ಶ್ರೀಕಂಠಪುರಿ ಬಡಾವಣೆಯಲ್ಲಿರುವ ರಂಗಮಂದಿರದ ಬಳಿ ಒಳಾಂಗಣ ನಿರ್ಮಾಣ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ವಾದ್ಯ ನುಡಿಸಲು ವಿವಿಧ ವಾದ್ಯ ಉಪಕರಣಗಳನ್ನು ವಿತರಿಸುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

14) **ಶ್ರೀ ವೈ.ಎ. ನಾರಾಯಣಸ್ವಾಮಿ ಇವರು** – ರಾಜ್‌ಮಹಲ್ ವಿಲಾಸ್–2ನೇ ಬಡಾವಣೆ ರಚನೆಗಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ರೈತರ ಜಮೀನುಗಳನ್ನು ವಶಪಡಿಸಿಕೊಂಡು 40 ವರ್ಷಗಳು ಕಳೆದರೂ ಬಡಾವಣೆಗಳು ಸರಿಯಾಗಿ ರಚನೆಯಾಗದೇ ಇರುವುದು ಹಾಗೂ ಸದರಿ ನಿವೇಶನಗಳ ಮಾಲೀಕರಿಗೆ ಇದುವರೆವಿಗೂ ರೀಕನ್ವೆ ಮಾಡದೇ ಇರುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

15) **ಶ್ರೀ ಬಿ. ಸುರೇಶ್‌ಗೌಡ ಇವರು** – ತುಮಕೂರು ತಾಲ್ಲೂಕು ಹೆಬ್ಬೂರು ಹೋಬಳಿ ಕರಡಗೆರೆ ಕಾವಲ್ ಗ್ರಾಮದ ಸರ್ವೆ ನಂ. 5ರಲ್ಲಿರುವ ಒಟ್ಟು 837.27 ಎಕರೆ ಜಮೀನಿನಲ್ಲಿ ಅಕ್ರಮವಾಗಿ ಸಾಗುವಳಿ ಮಾಡುತ್ತಿರುವ ರೈತರು ನಮೂನೆ 50 ಮತ್ತು 53ರಡಿ ಜಮೀನು ಮಂಜೂರು ಮಾಡುವಂತೆ ಕೋರಿ ಅರ್ಜಿ ಸಲ್ಲಿಸಿದ್ದು ಅವರುಗಳಿಗೆ ಜಮೀನು ಮಂಜೂರು ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

16) **ಶ್ರೀ ಹೆಚ್.ಎಸ್. ಶಿವಶಂಕರ್ ಇವರು** – ದಾವಣಗೆರೆ ಜಿಲ್ಲಾ ಹಾಪ್‌ಕಾಮ್ಸ್‌ನಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ ಸಹಕಾರ ಸಂಘಗಳ ಸಹಕಾರ ನಿಬಂಧಕರು ವರದಿ ಸಲ್ಲಿಸಿದ್ದರೂ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳದೇ ಇರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

–7–

17) **ಶ್ರೀ ವೈ.ಎ. ನಾರಾಯಣಸ್ವಾಮಿ ಇವರು** – ಹೆಬ್ಬಾಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿಶ್ವನಾಥ ನಾಗೇನಹಳ್ಳಿ ವಾರ್ಡ್ ನಂ. 22ರಲ್ಲಿ ಬರುವ ಗುಡ್ಡದಹಳ್ಳಿಯ ಎ.ಕೆ. ಕಾಲೋನಿ ಮುಖ್ಯರಸ್ತೆಯಲ್ಲಿ ಎಂ.ಎಸ್.ಐ.ಎಲ್.ನ ಎಂ.ಆರ್.ಪಿ ಮದ್ಯದ ಅಂಗಡಿಯ ಪರವಾನಗಿ ರದ್ದುಪಡಿಸಿರುವ ಬಗ್ಗೆ ಮಾನ್ಯ ಅಬಕಾರಿ ಸಚಿವರ ಗಮನ ಸೆಳೆಯುವುದು.

18) **ಶ್ರೀ ಸಾ.ರಾ. ಮಹೇಶ್ ಇವರು** – ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಅನುದಾನ ಕೊರತೆಯಿದ್ದು ಸಂಸ್ಥೆಯು ಆರ್ಥಿಕ ಸಂಕಷ್ಟದಲ್ಲಿದ್ದರೂ ಕೆಂಪೇಗೌಡ ಬಡಾವಣೆಯ ಕಾಮಗಾರಿಗಳನ್ನು ಎಸ್.ಆರ್. ದರಕ್ಕಿಂತ ಹೆಚ್ಚಿಗೆ ದರದಲ್ಲಿ ಗುತ್ತಿಗೆ ನೀಡಿರುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

19) **ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ ಮತ್ತು ಹೆಚ್.ಡಿ. ರೇವಣ್ಣ ಇವರುಗಳು** – ಹಾಸನ ಜಿಲ್ಲೆಯ ಹೊಳೆನರಸೀಪುರ ಪಟ್ಟಣದಲ್ಲಿರುವ ಸಾರ್ವಜನಿಕ ಆಸ್ಪತ್ರೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

20) **ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ ಮತ್ತು ಕೆ.ಎಂ. ಶಿವಲಿಂಗೇಗೌಡ ಇವರುಗಳು** – ಹಾಸನ ಜಿಲ್ಲೆ, ಚನ್ನರಾಯಪಟ್ಟಣ ತಾಲ್ಲೂಕು ವ್ಯಾಪ್ತಿಯ ದಂಡಿಗನ ಹೋಬಳಿ ಆನೇಕೆರೆ ಹಾಗೂ ಇತರೆ 65 ಗ್ರಾಮಗಳಿಗೆ "ಬಹು ಗ್ರಾಮ ಯೋಜನೆಯಡಿಯಲ್ಲಿ" ಶಾಶ್ವತ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ವಿಷಯದ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

21) **ಶ್ರೀ ಹೆಚ್.ಎಸ್. ಶಿವಶಂಕರ್ ಇವರು** – ಹರಿಹರ ತಾಲ್ಲೂಕಿನ ಮಲೆಬೆನ್ನೂರು ಪುರಸಭೆ ಮತ್ತು ಹೋಬಳಿಯ ಗ್ರಾಮಗಳಿಗೆ ಕುಡಿಯುವ ನೀರು ಒದಗಿಸುವುದು ಹಾಗೂ ಕೊಮಾರನಹಳ್ಳಿ ಕೆರೆಗೆ ನೀರು ತುಂಬಿಸುವುದು ಹಾಗೂ ನಂದಿಗಾವಿ ಗ್ರಾಮದ ಹತ್ತಿರ ತುಂಗಭದ್ರ ನದಿಗೆ ಬ್ಯಾರೇಜ್ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ(I/c)
